**Akashvani : Bangalore**
**National Bulletin In Kannada**
**12.05.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ನಾಲ್ಕನೇ ಹಂತದ ಲೋಕಸಭಾ ಚುನಾವಣೆ; ೯೬ ಕ್ಷೇತ್ರಗಳಲ್ಲಿ ನಾಳೆ ಮತದಾನಕ್ಕೆ ಸಕಲ ಸಿದ್ಧತೆ

೨. ಆಂಧ್ರಪ್ರದೇಶದ ವಿಧಾನಸಭೆಯ ಒಟ್ಟು ೧೭೫, ಒಡಿಶಾದ ೨೮ ವಿಧಾನಸಭಾ ಕ್ಷೇತ್ರಗಳಿಗೂ ನಾಳೆ ಚುನಾವಣೆ

೩. ಇಂದು ತೆರೆದ ಪ್ರಸಿದ್ಧ ಬದರಿನಾಥ ದೇಗುಲದ ದ್ವಾರಗಳು - ಸಾಗರೋಪಾದಿಯಲ್ಲಿ ಹರಿದು ಬಂದ ಭಕ್ತ ಸಮೂಹ

೪. ಐಪಿಎಲ್ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಕೋಲ್ಕತ್ತಾ ನೈಟ್ ರೈಡರ್ಸ್‌ಗೆ ೧೮ ರನ್ ಜಯ

**<><*<><>*><>**

ನಾಳೆ ನಾಲ್ಕನೇ ಹಂತದ ಲೋಕಸಭಾ ಚುನಾವಣೆ ನಡೆಯಲಿದೆ. ಅಂದು ಆಂಧ್ರಪ್ರದೇಶದ ವಿಧಾನಸಭೆಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಒಡಿಶಾ ವಿಧಾನಸಭೆಗೆ ನಡೆಯಲಿರುವ ಮೊದಲ ಹಂತದ ಚುನಾವಣೆಯ ಬಹಿರಂಗ ಪ್ರಚಾರವೂ ನಿನ್ನೆ ಸಂಜೆ ಮುಕ್ತಾಯಗೊಂಡಿದೆ. ನಾಳೆ ೯ ರಾಜ್ಯಗಳು ಮತ್ತು ೧ ಕೇಂದ್ರಾಡಳಿತ ಪ್ರದೇಶದ ವ್ಯಾಪ್ತಿಗೆ ಬರುವ ಒಟ್ಟು ೯೬ ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಉತ್ತರ ಪ್ರದೇಶದ ೧೩, ಮಹಾರಾಷ್ಟ್ರದ ೧೧, ಮಧ್ಯಪ್ರದೇಶ ಮತ್ತು ಪಶ್ಚಿಮ ಬಂಗಾಳದ ತಲಾ ೮, ಬಿಹಾರದ ೫, ಜಾರ್ಖಂಡ್ ಮತ್ತು ಒಡಿಶಾದ ತಲಾ ೪, ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ೧ ಲೋಕಸಭಾ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದೆ. ಆಂಧ್ರಪ್ರದೇಶದ ೨೫ ಲೋಕಸಭಾ ಕ್ಷೇತ್ರಗಳು ಮತ್ತು ತೆಲಂಗಾಣದ ೧೭ ಲೋಕಸಭಾ ಕ್ಷೇತ್ರಗಳಿಗೆ ಇದೇ ಹಂತದಲ್ಲಿ ಏಕಕಾಲಕ್ಕೆ ಚುನಾವಣೆ ನಡೆಯಲಿದೆ. ಆಂಧ್ರಪ್ರದೇಶ ವಿಧಾನಸಭೆಯ ಎಲ್ಲ ೧೭೫ ಕ್ಷೇತ್ರಗಳಿಗೆ ಮತ್ತು ಒಡಿಶಾ ವಿಧಾನಸಭೆಯ ಒಟ್ಟು ೧೪೭ ಕ್ಷೇತ್ರಗಳ ಪೈಕಿ ೨೮ ಕ್ಷೇತ್ರಗಳಿಗೆ ನಾಳೆ ಏಕಕಾಲಕ್ಕೆ ಮತದಾನ ನಡೆಯಲಿದೆ. ಒಡಿಶಾದ ಕಂದಮಾಲ್ ಜಿಲ್ಲೆಯ ಫುಲ್ಬನಿಯಲ್ಲಿ ನಿನ್ನೆ ಏರ್ಪಡಿಸಿದ್ದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಪ್ರಧಾನಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ, ಜೂನ್ ೪ ರಂದು ಹೊರಬರಲಿರುವ ಸಾರ್ವತ್ರಿಕ ಚುನಾವಣೆಯ ಫಲಿತಾಂಶದ ನಂತರ ಕಾಂಗ್ರೆಸ್ ಪಕ್ಷ ಲೋಕಸಭೆಯಲ್ಲಿ ಪ್ರತಿಪಕ್ಷದ ಸ್ಥಾನವನ್ನೂ ಪಡೆಯಲು ಸಾಧ್ಯವಾಗುವುದಿಲ್ಲ ಎಂದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಆಂಧ್ರಪದೇಶದ ತಿರುಪತಿಯಲ್ಲಿ ನಿನ್ನೆ ರೋಡ್ ಶೋ ನಡೆಸಿ, ಮತಯಾಚನೆ ಮಾಡಿದರು.

ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ, ಬುಡಕಟ್ಟು ಜನಾಂಗದ ಪ್ರಾಬಲ್ಯವಿರುವ ಉತ್ತರ ಮಹಾರಾಷ್ಟ್ರದ ನಂದೂರ್‌ಬರ್ ಜಿಲ್ಲೆಯಲ್ಲಿ ಏರ್ಪಡಿಸಲಾಗಿದ್ದ ಚುನಾವಣಾ ರ‍್ಯಾಲಿಯಲ್ಲಿ ಭಾಗವಹಿಸಿದ್ದರು.

<><*<><>*><>

ಒಡಿಶಾದಲ್ಲಿ ನಾಳೆ ನಡೆಯಲಿರುವ ಲೋಕಸಭೆ ಮತ್ತು ವಿಧಾನಸಭೆಗೆ ಏಕಕಾಲಕ್ಕೆ ನಾಲ್ಕು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಬಿಜೆಪಿ, ಕಾಂಗ್ರೆಸ್ ಹಾಗೂ ಬಿಜೆಡಿ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ.

<><*<><>*><>

ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಪಶ್ಚಿಮ ಬಂಗಾಳದಲ್ಲಿ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸುವ ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸಲಿದ್ದಾರೆ.  ಪ್ರಧಾನಿ ಅವರು, ಇಂದು ನಾಲ್ಕು ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಲಿದ್ದು, ಪಕ್ಷದ ಬರಾಕ್‌ಪುರ್ ಅಭ್ಯರ್ಥಿ ಪರ ಮತಯಾಚಿಸಲಿದ್ದಾರೆ. ನಂತರ ಅವರು, ಹೌರಾದ ಪಂಚಲಾ, ಚಿನ್ಸುರಾ ಮತ್ತು ಹೂಗ್ಲಿ ಜಿಲ್ಲೆಯ ಪುರ್ಶುರಾದಲ್ಲಿ ಮೂರು ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿ ಭೇಟಿ ಹಿನ್ನೆಲೆಯಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಪರಗಣದ ಜಗತ್‌ದಲ್‌ನಲ್ಲಿ ಸಾರ್ವಜನಿಕ ಸಭೆಯಲ್ಲೂ ಕೂಡ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಉತ್ತರಾಖಂಡದಲ್ಲಿ, ಚಮೋಲಿ ಜಿಲ್ಲೆಯಲ್ಲಿರುವ ಪ್ರಸಿದ್ಧ ಬದರಿನಾಥ ದೇಗುಲದ ದ್ವಾರಗಳು ಭಕ್ತರಿಗಾಗಿ ಇಂದು ಬೆಳಿಗ್ಗೆ ತೆರೆಯಲ್ಪಡುತ್ತವೆ. ಉದ್ಘಾಟನೆಗೂ ಮುನ್ನ, ಪವಿತ್ರ ಸ್ಥಳವನ್ನು ಹೂವುಗಳಿಂದ ಅಲಂಕರಿಸಲಾಗಿದೆ. ಬದರಿನಾಥ ಧಾಮಕ್ಕೆ ಭಕ್ತರು ಆಗಮಿಸುವ ಪ್ರಕ್ರಿಯೆ ಇಂದು ಆರಂಭವಾಗಿದೆ. ಬದರಿನಾಥ ಧಾಮದಲ್ಲಿ ಭಕ್ತರಿಗೆ ಸುಗಮ ದರ್ಶನಕ್ಕೆ ಅನುಕೂಲವಾಗುವಂತೆ ಆಡಳಿತ ಮಟ್ಟದಲ್ಲಿ ವ್ಯಾಪಕ ವ್ಯವಸ್ಥೆ ಮಾಡಲಾಗಿದೆ. ಏತನ್ಮಧ್ಯೆ, ಚಾರ್ ಧಾಮ್ ಯಾತ್ರೆಯ ಮೊದಲ ದಿನ, ೪೩ ಸಾವಿರಕ್ಕೂ ಕ್ಕೂ ಹೆಚ್ಚು ಭಕ್ತರು ಕೇದಾರನಾಥ, ಗಂಗೋತ್ರಿ ಮತ್ತು ಯಮುನೋತ್ರಿ ಧಾಮಕ್ಕೆ ಭೇಟಿ ನೀಡಿದರು.  ಮತ್ತೊಂದೆಡೆ, ಚಾರ್ ಧಾಮ್ ಯಾತ್ರೆಗೆ ನೋಂದಾಯಿಸಿದವರ ಸಂಖ್ಯೆ ೩೩ ಲಕ್ಷ ದಾಟಿದೆ.

<><*<><>*><>

ಭಾರತದ ಚುನಾವಣಾ ಆಯೋಗ, ಕಾರ್ಗಿಲ್‌ನಲ್ಲಿ "ಮನೆಯಿಂದ ಮತ" ಉಪಕ್ರಮವನ್ನು ಪರಿಚಯಿಸಿದೆ. ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ವಿಕಲಚೇತನರು ತಮ್ಮ ಮತದಾನದ ಹಕ್ಕನ್ನು ಅಡೆತಡೆಗಳಿಲ್ಲದೆ ಚಲಾಯಿಸಲು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿರುವ ಈ ಉಪಕ್ರಮವು ಭಾರತದ ಚುನಾವಣಾ ಭೂದೃಶ್ಯದಲ್ಲಿ ಮಹತ್ವದ ಮೈಲಿಗಲ್ಲು ಎಂದು ಸಹಾಯಕ ಚುನಾವಣಾಧಿಕಾರಿ ಅಬ್ದುಲ್ ಹದಿ ಹೇಳಿದ್ದಾರೆ. "ಮನೆಯಿಂದ ಮತ" ಉಪಕ್ರಮದ ಅನುಷ್ಠಾನವು ಕಾರ್ಗಿಲ್‌ನಲ್ಲಿ ಶುಕ್ರವಾರದಿಂದ ಪ್ರಾರಂಭವಾಯಿತು.

ಮೊದಲ ದಿನ ಅಭೂತಪೂರ್ವ ಪ್ರತಿಕ್ರಿಯೆಗೆ ಸಾಕ್ಷಿಯಾಯಿತು, ೨೯೫ ಅರ್ಹ ಮತದಾರರಲ್ಲಿ ೪೭ ಮತಗಳು ಚಲಾವಣೆಯಾದವು. ಸಹಾಯಕ ಚುನಾವಣಾಧಿಕಾರಿ ಪೋಸ್ಟಲ್ ಉಪಕ್ರಮದ ತಡೆರಹಿತ ಕಾರ್ಯಗತಗೊಳಿಸುವಿಕೆ ಮತ್ತು ಚುನಾವಣಾ ಸಮಾನತೆಯನ್ನು ಉತ್ತೇಜಿಸುವಲ್ಲಿ ಅದರ ಪ್ರಮುಖ ಪಾತ್ರವನ್ನು ಶ್ಲಾಘಿಸಿದರು. ಸುಗಮ ಮತ್ತು ಪಾರದರ್ಶಕ ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸಲು, ಕಾರ್ಗಿಲ್ ಜಿಲ್ಲೆಯನ್ನು ನಿಖರವಾಗಿ ಏಳು ವಲಯಗಳಾಗಿ ವಿಂಗಡಿಸಲಾಗಿದೆ ಎಂದು ಅವರು ಹೇಳಿದರು. ಚುನಾವಣಾ ಪ್ರಕ್ರಿಯೆಗಳ ಸಮಗ್ರತೆಯನ್ನು ಕಾಪಾಡಲು ಕಠಿಣ ಭದ್ರತಾ ಕ್ರಮಗಳು ಮತ್ತು ಸೂಕ್ಷ್ಮ ವೀಕ್ಷಕರ ನಿಯೋಜನೆಯನ್ನು ಅಳವಡಿಸಲಾಗಿದೆ ಎಂದು ಅವರು ಹೇಳಿದರು.

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ, ಇಸ್ರೋ ಸಂಯೋಜಕ ಉತ್ಪಾದನಾ ತಂತ್ರಜ್ಞಾನದ ಮೂಲಕ ತಯಾರಿಸಲಾದ ಹೊಸ ದ್ರವ ರಾಕೆಟ್ ಎಂಜಿನ್ ಅನ್ನು ಯಶಸ್ವಿಯಾಗಿ ಪರೀಕ್ಷಿಸಿದೆ. ತಮಿಳುನಾಡಿನ ಮಹೇಂದ್ರಗಿರಿಯಲ್ಲಿರುವ ಇಸ್ರೋ ಪ್ರೊಪಲ್ಷನ್ ಕಾಂಪ್ಲೆಕ್ಸ್‌ನಲ್ಲಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ಹೊಸ ಮರುವಿನ್ಯಾಸಗೊಳಿಸಲಾದ **PS**೪ ಎಂಜಿನ್ ಭಾಗಗಳ ಸಂಖ್ಯೆಯನ್ನು ೧೪ ರಿಂದ ಒಂದೇ ಭಾಗಕ್ಕೆ ಇಳಿಸಿದೆ. ಇದು ಪ್ರತಿ ಇಂಜಿನ್‌ಗೆ ಕಚ್ಚಾ ವಸ್ತುಗಳ ಬಳಕೆಯನ್ನು ಗಮನಾರ್ಹವಾಗಿ ಉಳಿಸುತ್ತದೆ, ಲೋಹದ ಪುಡಿಯನ್ನು ೫೬೫ ಕೆಜಿಯಿಂದ ೧೩.೭ ಕೆಜಿಗೆ ಕಡಿಮೆ ಮಾಡುತ್ತದೆ ಮತ್ತು ಉತ್ಪಾದನಾ ಸಮಯವನ್ನು ೬೦ ಪ್ರತಿಶತದಷ್ಟು ಕಡಿಮೆ ಮಾಡುತ್ತದೆ. ಈ ಹೊಸ ಮರುವಿನ್ಯಾಸಗೊಳಿಸಲಾದ ಎಂಜಿನ್ ಅನ್ನು ಪಿಎಸ್‌ಎಲ್‌ವಿ ಉಡಾವಣಾ ವಾಹನದ ನಾಲ್ಕನೇ ಹಂತಕ್ಕೆ ಮತ್ತು ಪಿಎಸ್‌ಎಲ್‌ವಿಯ ಮೊದಲ ಹಂತದ ರಿಯಾಕ್ಷನ್ ಕಂಟ್ರೋಲ್ ಸಿಸ್ಟಮ್‌ನಲ್ಲಿಯೂ ಬಳಸಲಾಗುತ್ತದೆ.

**<><*<><>*><>**

ಆರ್ಥಿಕತೆಯನ್ನು ಬಲಿಷ್ಠಗೊಳಿಸಲು ಮತ್ತು ಭಾರತವನ್ನು ಜಗತ್ತಿಗೆ ಮಾರ್ಗದರ್ಶಿಯಾಗಿಸಲು ಭಾರತಕ್ಕೆ ಬಲಿಷ್ಠ ನಾಯಕತ್ವದ ಅಗತ್ಯವಿದೆ ಎಂದು ಬಿಜೆಪಿಯ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಪುಣೆಯಲ್ಲಿ ನಿನ್ನೆ ಬಿಜೆಪಿಯ ಅಭ್ಯರ್ಥಿ ಪರ ಪ್ರಚಾರ ನಡೆಸಿ ಅವರು ಮಾತನಾಡಿದರು. ದೇಶದ ಪ್ರಗತಿಗಾಗಿ ತಮ್ಮ ಪಕ್ಷವನ್ನು ಬೆಂಬಲಿಸುವಂತೆ ನಿತಿನ್ ಗಡ್ಕರಿ ಮತದಾರರಲ್ಲಿ ಮನವಿ ಮಾಡಿದರು. ೬೦ ವರ್ಷಗಳ ಕಾಂಗ್ರೆಸ್ ಸಾಧನೆಗೆ ಹೋಲಿಸಿದರೆ ಕೇಂದ್ರ ಸರ್ಕಾರ ಹತ್ತು ವರ್ಷಗಳಲ್ಲಿ ಮೂರು ಪಟ್ಟು ಕೆಲಸ ಮಾಡಿದೆ ಎಂದು ಕಿಡಿಕಾರಿದರು. ಕಾಂಗ್ರೆಸ್‌ಗೆ ಯಾವುದೇ ಅಭಿವೃದ್ಧಿ ಅಜೆಂಡಾ ಇಲ್ಲ ಎಂದು ಗಡ್ಕರಿ ಆರೋಪಿಸಿದ್ದಾರೆ.

**<><*<><>*><>**

ಭಾರತದಲ್ಲಿ ಆರ್ಬಿಟ್ರೇಟ್ ಮೇಕ್ ಇನ್ ಇಂಡಿಯಾದ ಪ್ರಮುಖ ಅಂಶವಾಗಿದೆ ಮತ್ತು ವಿಕ್ಷಿತ್ ಭಾರತ್‌ನ ಪ್ರಯಾಣದಲ್ಲಿ ಮಧ್ಯಸ್ಥಿಕೆ ಸಹಾಯ ಮಾಡುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿ ಆರ್ಬಿಟ್ರೇಶನ್ ಬಾರ್ ಆಫ್ ಇಂಡಿಯಾವನ್ನು ಉದ್ಘಾಟಿಸಿದ ಡಾ.ಜೈಶಂಕರ್, ಮಧ್ಯಸ್ಥಿಕೆಯು ಆಧುನಿಕ ವಿವಾದ ಪರಿಹಾರದ ಮೂಲಾಧಾರವೆಂದು ಗುರುತಿಸಲ್ಪಟ್ಟಿದೆ ಎಂದು ಹೇಳಿದರು.

ಭಾರತದ ತ್ವರಿತ ಆರ್ಥಿಕ ಪ್ರಗತಿಯಲ್ಲಿ ಇದು ಪ್ರಮುಖವಾಗಿದೆ ಎಂದು ಅವರು, ಈ ಘಟನೆಯು ವಿಶ್ವದಲ್ಲಿ ಭಾರತದ ಶಕ್ತಿ ಮತ್ತು ಪ್ರಭಾವದ ಗಮನಾರ್ಹ ಪುನರ್ವಿತರಣೆಯಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವರು ಹೇಳಿದರು.

<><*<><>*><>

ಮಹಾರಾಷ್ಟ್ರದ ರಾಯಗಢದಲ್ಲಿ ಆಡಳಿತ ಮಂಡಳಿ ನಡೆಸಿದ ವಿಪತ್ತು ನಿರ್ವಹಣಾ ಸಮೀಕ್ಷೆಯಲ್ಲಿ ಜಿಲ್ಲೆಯಲ್ಲಿ ೫೨೦ ಹಳ್ಳಿಗಳನ್ನು ಹೊಂದಿದ್ದು, ಭೂಕುಸಿತಗಳು, ಪ್ರವಾಹದಿಂದಾಗಿ ನೀರಿನ ಆಕ್ರಮಣದಂತಹ ವಿಪತ್ತುಗಳಿಂದ ಪ್ರಭಾವಿತವಾಗಬಹುದು ಎಂದು ತಿಳಿಸಿದೆ. ೨೯ ಭೂಕುಸಿತ ಪೀಡಿತ ಗ್ರಾಮಗಳು, ೧೩೬ ಹಳ್ಳಿಗಳು ಪ್ರವಾಹದಿಂದ ಹಾನಿಗೊಳಗಾಗಬಹುದು ಮತ್ತು ೧೪೫ ಹಳ್ಳಿಗಳು ಹೆಚ್ಚಿನ ಅಲೆಗಳ ಪ್ರತಿಕೂಲ ಪರಿಣಾಮಗಳನ್ನು ಎದುರಿಸಬಹುದು. ಹವಾಮಾನ ಇಲಾಖೆಯ ಪ್ರಕಾರ, ಈ ಮಾನ್ಸೂನ್‌ನಲ್ಲಿ ೨೨ ಹೆಚ್ಚಿನ ಉಬ್ಬರವಿಳಿತದ ದಿನಗಳು ಇರುತ್ತವೆ. ಕೆಲವು ಅಲೆಗಳು ೪.೫ ಮೀಟರ್‌ಗಳಷ್ಟು ಎತ್ತರದಲ್ಲಿರುತ್ತವೆ. ಜಿಲ್ಲೆಯಲ್ಲಿ ಅಂಬಾ, ಪಾತಾಳಗಾನಗಾ, ಗಡಿ, ಸಾವಿತ್ರಿ, ಗಾಂಧಾರಿ, ಉಲ್ಲಾಸ್, ಕಲ್ ಮತ್ತು ಕುಂಡಲಿಕ ಬಾಲಗಂಗಾ ನದಿಗಳ ದಡದಲ್ಲಿ ೨೬೨ ಗ್ರಾಮಗಳಿವೆ.

<><*<><>*><>

ಅಫ್ಘಾನಿಸ್ತಾನದಲ್ಲಿ, ಭಾರೀ ಮಳೆಯಿಂದ ಉಂಟಾದ ಹಠಾತ್ ಪ್ರವಾಹದಿಂದಾಗಿ ಸಾವಿನ ಸಂಖ್ಯೆ ೩೦೦ ಕ್ಕೆ ಏರಿದೆ ಎಂದು ಯುಎನ್ ಆಹಾರ ಕಾರ್ಯಕ್ರಮ ದೃಢಪಡಿಸಿದೆ. ಧಾರಾಕಾರ ಮಳೆ ಮತ್ತು ವಿನಾಶಕಾರಿ ಪ್ರವಾಹಗಳು ಉತ್ತರ ಮತ್ತು ವಾಯುವ್ಯ ಅಫ್ಘಾನಿಸ್ತಾನವನ್ನು ಸಹ ಜರ್ಜರಿತಗೊಳಿಸಿದೆ ಎಂದು ಹೇಳಿದೆ. ಉತ್ತರ ಪ್ರಾಂತ್ಯದ ಬಾಗ್ಲಾನ್‌ನಲ್ಲಿ ನಿನ್ನೆಯಷ್ಟೇ ೬೨ ಮಂದಿ ಸಾವನ್ನಪ್ಪಿದ್ದಾರೆ. ಸುಮಾರು ೩ ಸಾವಿರ ಮನೆಗಳನ್ನು ನಾಶಪಡಿಸಿತು, ನೂರಾರು ಜಾನುವಾರುಗಳು ಸಾವನ್ನಪ್ಪಿದವು, ರಸ್ತೆಗಳು ಮತ್ತು ಇತರ ಮೂಲಸೌಕರ್ಯಗಳಿಗೆ ಹಾನಿಯಾಗಿದೆ. ರಕ್ಷಣಾ ತಂಡಗಳು ಪೀಡಿತ ಪ್ರದೇಶಗಳನ್ನು ತಲುಪಿವೆ ಮತ್ತು ಭಾರೀ ಪ್ರವಾಹದಿಂದಾಗಿ ರಸ್ತೆಗಳು ಮುಚ್ಚಲ್ಪಟ್ಟಿದ್ದರಿಂದ ಗಾಯಾಳುಗಳನ್ನು ಹೆಲಿಕಾಪ್ಟರ್‌ಗಳ ಮೂಲಕ ಆಸ್ಪತ್ರೆಗಳಿಗೆ ಕರೆದೊಯ್ಯಲಾಗಿದೆ.

<><*<><>*><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡದ ವಿರುದ್ಧ ಕೋಲ್ಕತ್ತ ನೈಟ್ ರೈಡರ್ಸ್ ತಂಡ ೧೮ ರನ್‌ಗಳಿಂದ ಜಯ ಸಾಧಿಸಿದೆ. ಮಳೆ ಹಿನ್ನೆಲೆ ೧೬ ಓವರ್‌ಗಳಿಗೆ ಇಳಿಕೆಗೊಂಡ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಕೋಲ್ಕತ್ತಾ ತಂಡ ೭ ವಿಕೆಟ್ ನಷ್ಟಕ್ಕೆ ೧೫೭ ರನ್ ಗಳಿಸಿತು. ಕೋಲ್ಕತ್ತಾ ಪರ ವೆಂಕಟೇಶ್ ಐಯರ್ ೨೧ ಎಸೆತಗಳಲ್ಲಿ ೪೨ ರನ್ ಗಳಿಸಿದರು. ಮುಂಬೈ ಪರ ಜಸ್ಪ್ರಿತ್ ಬುಮ್ರಾ ಮತ್ತು ಪಿಯುಷ್ ಚಾವ್ಲಾ ತಲಾ ೨ ವಿಕೆಟ್ ಪಡೆದರು. ೧೫೮ ರನ್ ಗಳ ಗುರಿ ಬೆನ್ನತ್ತಿದ ಮುಂಬೈ ತಂಡ ನಿಗದಿತ ೧೬ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೩೯ ರನ್ ಗಳಿಸಲಷ್ಟೇ ಶಕ್ತವಾಯಿತು. ಕೋಲ್ಕತ್ತಾ ಪರ ಹರ್ಷಿತ್ ರಾಣಾ, ವರುಣ್ ಚಕ್ರವರ್ತಿ ಮತ್ತು ಆಂಡ್ರೆ ರಸಲ್ ತಲಾ ೨ ವಿಕೆಟ್ ಪಡೆದರು. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೩೦ ಕ್ಕೆ ಆರಂಭವಾಗಲಿದೆ.

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಇಂದಿನ ಮತ್ತೊಂದು ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<><>*><>**

ಥಾಯ್ಲೆಂಡ್‌ನ ಪಟ್ಟಾಯದಲ್ಲಿ ನಡೆದ ಪ್ಯಾರಾ ಪವರ್‌ಲಿಫ್ಟಿಂಗ್ ವಿಶ್ವಕಪ್ ೨೦೨೪ ರಲ್ಲಿ ಭಾರತದ ಸಕಿನಾ ಖಾತುನ್ ಪ್ಯಾರಾ ಪವರ್ ಲಿಫ್ಟಿಂಗ್‌ನಲ್ಲಿ ಎರಡು ಕಂಚಿನ ಪದಕಗಳನ್ನು ಗೆದ್ದಿದ್ದಾರೆ.

**<><*<>** ಇಲ್ಲಿಗೆ ವಾರ್ತಾಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**